ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ವೃದ್ಧಾಶ್ರಮ ಮತ್ತು ಅನಾಥಾಶ್ರಮಗಳನ್ನು ಸಂಯೋಜಿಸುವ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

500(374) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವೃದ್ಧಾಶ್ರಮ ಮತ್ತು ಅನಾಥಾಶ್ರಮಗಳನ್ನು ಸಂಯೋಜಿಸಿ ಪಾಲನಾ ಗೃಹಗಳನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಆ) ವೃದ್ಧಾಶ್ರಮದಲ್ಲಿರುವ ವೃದ್ಧರಿಗೆ ಅನಾಥ ಮಕ್ಕಳ ಪಾಲನೆಯ ಜವಾಬ್ದಾರಿಯನ್ನು ನೀಡುವ ಕುರಿತು ಸರ್ಕಾರ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ;

(ಇ) ಕಳೆದ 5 ವರ್ಷಗಳಲ್ಲಿ ಎಷ್ಟು ಮಕ್ಕಳನ್ನು ದತ್ತು ನೀಡಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)